**ಈಗಾಗಲೇ ಅರ್ಜಿ ಸಲ್ಲಿಸಿ ಶುಲ್ಕ ಪಾವತಿಸಿದ ಅಭ್ಯರ್ಥಿಗಳಿಗೆ ವಿಶೇಷ ಸೂಚನೆ:**

ಎ) ಬ್ಯಾಂಕಿನ ನೇಮಕಾತಿ ಪ್ರಕಟಣೆ ಸಂಖ್ಯೆ:12:2026–27 ದಿನಾಂಕ: 06.04.2026 ರನ್ವಯ ಬ್ಯಾಂಕಿನ ನೇಮಕಾತಿಗೆ ಸಂಬಂಧಿಸಿದಂತೆ ಈಗಾಗಲೇ ಅರ್ಜಿ ಶುಲ್ಕದೊಂದಿಗೆ **On-line** ಮೂಲಕ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಪ್ರಸ್ತುತ ಪ್ರಕಟಿಸಲಾಗಿರುವ ಮೇಲ್ಕಂಡ ಅನ್ವಯವಾಗುವ ಹುದ್ದೆಗಳಿಗೆ ಮರು **On-line** ಮೂಲಕ ಕಡ್ಡಾಯವಾಗಿ ಅಗತ್ಯ ದಾಖಲಾತಿಗಳೊಂದಿಗೆ ಮರು ಅರ್ಜಿ (**Application Re-submit**) ಸಲ್ಲಿಸತಕ್ಕದ್ದು. ಪ್ರಸ್ತುತ **On-line** ಮೂಲಕ ಮರು ಅರ್ಜಿ ಸಲ್ಲಿಸುವ ಅರ್ಹ ಅಭ್ಯರ್ಥಿಗಳು ತಮ್ಮ ಅರ್ಜಿಯಲ್ಲಿ ಈ ಹಿಂದೆ ಶುಲ್ಕದೊಂದಿಗೆ ಸಲ್ಲಿಸಿರುವ ಅರ್ಜಿ ನೊಂದಣಿ ಸಂಖ್ಯೆ ವಿವರವನ್ನು ಸ್ಪಷ್ಟವಾಗಿ ನಮೂದಿಸಿ ತಿದ್ದುಪಡಿ ಮಾಡುವುದಿದ್ದರೆ ಮಾಡಿಕೊಂಡು ದಾಖಲಾತಿಗಳನ್ನು **Upload** ಮಾಡಿ ಮತ್ತೊಮ್ಮೆ ಮರು ಅರ್ಜಿ (**Re-Submit**) ಸಲ್ಲಿಸತಕ್ಕದ್ದು. ಈಗಾಗಲೇ ಅರ್ಜಿಯೊಂದಿಗೆ ಅರ್ಜಿ ಶುಲ್ಕ ಪಾವತಿಸಿರುವ ಅಭ್ಯರ್ಥಿಗಳು ಪ್ರತ್ಯೇಕವಾಗಿ ಪುನಃ ಅರ್ಜಿ ಶುಲ್ಕ ಪಾವತಿಸುವ ಅಗತ್ಯತೆ ಇರುವುದಿಲ್ಲ. ಅರ್ಹತೆ ಇದ್ದಲ್ಲಿ ಶುಲ್ಕವನ್ನು ಹೊಂದಾಣಿಕೆ ಮಾಡಿಕೊಳ್ಳಲಾಗುವುದು.

ಬಿ) ದಿನಾಂಕ 06.04.2026ರ ನೇಮಕಾತಿ ಪ್ರಕಟಣೆಯಡಿಯಲ್ಲಿ ಈಗಾಗಲೇ ಅರ್ಜಿ ಸಲ್ಲಿಸಿ ಶುಲ್ಕ ಪಾವತಿಸಿ **Aplication Download** ಮಾಡಿಕೊಂಡಿರುವ ಅಭ್ಯರ್ಥಿಗಳು ಪುನಃ ಹೊಸದಾಗಿ ಅದೇ ನೊಂದಣಿ ಸಂಖ್ಯೆಯನ್ನು ನಮೂದಿಸಿ ಹೊಸದಾಗಿ ಮರು ಅರ್ಜಿ ಸಲ್ಲಿಸಿ, ದಾಖಲಾತಿಗಳನ್ನು ನಿಯಮಾನುಸಾರ **Upload** ಮಾಡತಕ್ಕದ್ದು. ಈಗಾಗಲೇ ಅರ್ಜಿಯೊಂದಿಗೆ ಅರ್ಜಿ ಶುಲ್ಕ ಪಾವತಿಸಿರುವ ಅಭ್ಯರ್ಥಿಗಳು ತಾವು ಅರ್ಜಿ ಸಲ್ಲಿಸಿರುವ ಹುದ್ದೆಗೆ ಪ್ರತ್ಯೇಕವಾಗಿ ಪುನಃ ಅರ್ಜಿ ಶುಲ್ಕ ಪಾವತಿಸುವ ಅಗತ್ಯತೆ ಇರುವುದಿಲ್ಲ. ಹಾಗೂ ಶುಲ್ಕದೊಂದಿಗೆ ಅರ್ಜಿ ಸಲ್ಲಿಸಿರುವ ಪ್ರತಿಯೊಂದು ಹುದ್ದೆಗೆ ಮರು ಅರ್ಜಿಯನ್ನು ಸಲ್ಲಿಸತಕ್ಕದ್ದು. ಒಂದು ವೇಳೆ ಮರು ಅರ್ಜಿ ಸಲ್ಲಿಕೆ (**Application Re-submit**) ಮಾಡದಿದ್ದಲ್ಲಿ ಅಂತಹವರ ಅರ್ಜಿಯನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. ಮತ್ತು ಪಾವತಿಸಿರುವ ಅರ್ಜಿ ಶುಲ್ಕವನ್ನು ಹಿಂದಿರುಗಿಸಲು ಅವಕಾಶವಿರುವುದಿಲ್ಲ. ಹಾಗೂ **Application Re-submit** ಮಾಡಿದ ನಂತರ ಪುನಃ ಮತ್ತೊಮ್ಮೆ ತಿದ್ದುಪಡಿಗೆ ಅವಕಾಶವಿರುವುದಿಲ್ಲ.

ಸಿ) ಈ ಬಗ್ಗೆ ಈಗಾಗಲೇ ಅರ್ಜಿ ಸಲ್ಲಿಸಿ ಶುಲ್ಕ ಪಾವತಿಸಿ **Application Download** ಮಾಡಿಕೊಂಡಿರುವ ಅಭ್ಯರ್ಥಿಗಳ ನೊಂದಣಿಯಾದ ಮೊಬೈಲ್ ಸಂಖ್ಯೆ ಮತ್ತು ಇ–ಮೇಲ್‌ಗೆ **SMS** ಮೂಲಕ ಮಾಹಿತಿಯನ್ನು ಸಹ ನೀಡಲಾಗುವುದು.

ರಿ.ನಂ 5398
ಹೊಸಪೇಟೆ



Scanned with OKEN Scanner

